# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – **560 002**

ಸಂಖ್ಯೆ: BBMP/Addl.Dir/JD North/0322/2017-18 ದಿನಾಂಕ: 26-07-2019.

## ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ)

ವಿಷಯ: ಆಸ್ತಿ ಖಾತಾ ಸಂಖ್ಯೆ. 843, ಸರ್ವೆ ನಂ. 21 & 22, ಅನಂತಪುರ ಗ್ರಾಮ, ಯಲಹಂಕ ಹೋಬಳಿ, ಬೆಂಗಳೂರು ಉತ್ತರ ತಾಲ್ಲೂಕು, ವಾರ್ಡ್ ನಂ. 02, ಯಲಹಂಕ ವಲಯ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು, ಇಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಮತ್ತು ಕ್ಲಬ್‌ಹೌಸ್ ಉಪಯೋಗದ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ಪ್ರಾರಂಭಿಕ ಪ್ರಮಾಣಪತ್ರ ಕೋರಲಾದ ತಮ್ಮ ಮನವಿ ಪತ್ರ ದಿನಾಂಕ: 11-07-2019.
2) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JD North/0322/2017-18, ದಿನಾಂಕ: 22-05-2018

* * * * * * *

ಆಸ್ತಿ ಖಾತಾ ಸಂಖ್ಯೆ: 843, ಸರ್ವೆ ನಂ. 21 & 22, ಅನಂತಪುರ ಗ್ರಾಮ, ಯಲಹಂಕ ಹೋಬಳಿ, ಬೆಂಗಳೂರು ಉತ್ತರ ತಾಲ್ಲೂಕು, ವಾರ್ಡ್ ನಂ. 02, ಯಲಹಂಕ ವಲಯ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಇಲ್ಲಿನ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ಬಿಲ್ಡಿಂಗ್ – 5 ರಲ್ಲಿ ತಳ + ನೆಲ + ಮೇಲಿನ 4 ಅಂತಸ್ತುಗಳ 170 ವಸತಿ + 30 EWS ಘಟಕಗಳು, ಬಿಲ್ಡಿಂಗ್ – 6, 7 & 8 ರಲ್ಲಿ ನೆಲ + ಮೇಲಿನ 4 ಅಂತಸ್ತುಗಳ 264 ವಸತಿ + 32 EWS ಘಟಕಗಳು ಸೇರಿದಂತೆ ಒಟ್ಟಾರೆ 434 ವಸತಿ + 62 EWS ಘಟಕಗಳುಳ್ಳ ವಸತಿ ಸಮುಚ್ಚಯ ಹಾಗೂ ಬಿಲ್ಡಿಂಗ್ – 9 ರಲ್ಲಿ ತಳ + ನೆಲ + ಮೇಲಿನ 3 ಅಂತಸ್ತುಗಳ ಕ್ಲಬ್‌ಹೌಸ್ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಉಲ್ಲೇಖ (2) ರಂತೆ ಈ ಕಛೇರಿಯಿಂದ ದಿನಾಂಕ: 22-05-2018 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಸದರಿ ವಸತಿ ಸಮುಚ್ಚಯ ಮತ್ತು ಕ್ಲಬ್‌ಹೌಸ್ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (1) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಕಟ್ಟಡ ನಿರ್ಮಾಣದ ಸ್ಥಳವನ್ನು ದಿನಾಂಕ: 16-07-2019 ರಂದು ಪರಿಶೀಲಿಸಲಾಗಿದ್ದು, ಮಂಜೂರಾತಿ ನಕ್ಷೆಯಂತೆ ಅಗತ್ಯ ನಡುಜಾಗಗಳನ್ನು ಬಿಟ್ಟು ಕಟ್ಟಡದ ಕಾಮಗಾರಿಯು ಪ್ರಗತಿಯಲ್ಲಿರುವುದನ್ನು ಗಮನಿಸಲಾಗಿರುತ್ತದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 25-07-2019 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ಶುಲ್ಕ ಮತ್ತು ದಂಡ ಶುಲ್ಕ ಸೇರಿ ಒಟ್ಟು ರೂ. **7,23,000/-** ಗಳಿಗೆ ಡಿ.ಡಿಯನ್ನು ಸಲ್ಲಿಸಿದ್ದು, ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/000201 ದಿನಾಂಕ: 26-07-2019 ರಲ್ಲಿ ಸಂಬಂಧಿಸಿದ ಲೆಕ್ಕ ಶೀರ್ಷಿಕೆಗೆ ಸಂದಾಯ ಮಾಡಿಕೊಳ್ಳಲಾಗಿದೆ. ಆದುದರಿಂದ ಉಲ್ಲೇಖ (2) ರಲ್ಲಿ ನಕ್ಷೆ ಮಂಜೂರಾತಿ ನೀಡಲಾದ ವಸತಿ ಸಮುಚ್ಚಯ ಮತ್ತು ಕ್ಲಬ್‌ಹೌಸ್ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.

2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.

3. ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

4. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

5. ವಿವಿಧ ಇಲಾಖೆಗಳಿಂದ ನೀಡಿರುವ ನಿರಾಪೇಕ್ಷಣಾ ಪತ್ರಗಳಲ್ಲಿ ವಿಧಿಸಿರುವ ಷರತ್ತನ್ನು ಪಾಲಿಸತಕ್ಕದ್ದು.

ಸಹಿ /-

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

A 26/7

ಗೆ,

M/s Vaishnavi Anushka Infrastructure LLP
No. 2/2, Walton road,
Off Vittal Mallya Road,
Bengaluru - 560001.

ಪ್ರತಿಯನ್ನು:

1. ಕಾರ್ಯಪಾಲಕ ಅಭಿಯಂತರರು (ಯಲಹಂಕ ವಿಭಾಗ) / ಸಹಾಯಕ ಕಾರ್ಯಪಾಲಕ ಅಭಿಯಂತರರು (ಯಲಹಂಕ ಉಪ-ವಿಭಾಗ) ರವರಿಗೆ ಮಾಹಿತಿಗಾಗಿ.
2. ಕಛೇರಿ ಪ್ರತಿ.

B.R. Muddappa 26/7/19

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

A 26/7 26/7 26/7/19